ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಚಾಮರಾಜನಗರ ಹೆದ್ದಾರಿಯಲ್ಲಿರುವ ಬೆಂದರವಾಡಿ ಕೆರೆ ಏರಿಯನ್ನು ಅಗಲೀಕರಣಗೊಳಿಸುವ ಬಗ್ಗೆ

ಶ್ರೀ ಎಸ್. ನಾಗರಾಜ್(ಸಂದೇಶ್ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

1145 (1240) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಮೈಸೂರು-ಚಾಮರಾಜನಗರ ಹೆದ್ದಾರಿಯಲ್ಲಿ ಬರುವ ಬೆಂಡರವಾಡಿ ಕೆರೆ ಏರಿಯ ಮೇಲಿನ ರಸ್ತೆಯು ಕಿರಿದಾಗಿ, ತಿರುವಿನಿಂದ ಕೂಡಿರುವುದರಿಂದ ದ್ವಿಮುಖ ವಾಹನ ಸಂಚಾರಕ್ಕೆ ಅಡಚಣೆ ಉಂಟಾಗಿದ್ದು, ಈ ಕೆರೆ ಏರಿಯ ಮೇಲೆ ಸಂಚರಿಸುವ ವಾಹನಗಳಿಗೆ ಅಪಾಯ ಸಂಭವಿಸಬಹುದಾದ ಪರಿಸ್ಥಿತಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ರಾಷ್ಟ್ರೀಯ ಹೆದ್ದಾರಿಯಲ್ಲಿ ವಾಹನ ಸಂಚಾರ ದಿನೇ ದಿನೇ ಅಧಿಕವಾಗುತ್ತಿರುವುದರಿಂದ, ಈ ಏರಿಯನ್ನು ಅಗಲೀಕರಣಗೊಳಿಸಿ ರಸ್ತೆಯನ್ನು ವಿಸ್ತರಿಸಿ, ವಾಹನಗಳ ಸುಗಮ ಸಂಚಾರಕ್ಕೆ ಅವಕಾಶ ಕಲ್ಪಿಸಿಕೊಡಲು ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದೇ?